ಉ) ಹಾಗಿದ್ದಲ್ಲಿ, ಉದ್ದೇಶಿತ ರಸ್ತೆಗೆ ಅನುದಾನ ಎಷ್ಟು ; ಸದರಿ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು ; ಯಾವಾಗ ಪೂರ್ಣಗೊಳಿಸಲಾಗುವುದು ;

ಊ) ಹುಬ್ಬಳ್ಳಿ–ಲಕ್ಷ್ಮೇಶ್ವರ ಮಧ್ಯೆ ಸಾಕಷ್ಟು ವಾಹನಗಳ ದಟ್ಟಣೆ ಮತ್ತು ಜನದಟ್ಟಣೆಯಿಂದಾಗಿ ರಸ್ತೆಯು ಹದಗೆಟ್ಟು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಹಾಗಿದ್ದಲ್ಲಿ ಅದನ್ನು ಕೂಡಲೇ ದುರಸ್ತಿಗೊಳಿಸಿ ರಾಜ್ಯ ಹೆದ್ದಾರಿಯನ್ನಾಗಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಇರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ ಆದರೆ ಈ ರಸ್ತೆಯನ್ನು ವಾರ್ಷಿಕ ನಿರ್ವಹಣೆ ಹಾಗೂ ದುರಸ್ತಿ ಅನುದಾನದಲ್ಲಿ ತಗ್ಗು ಗುಂಡಿಗಳನ್ನು ತುಂಬಿ ದುರಸ್ತಿ ಕೆಲಸವನ್ನು ಮಾಡಲಾಗುತ್ತಿದೆ.

ಇ) ಬಂದಿರುತ್ತದೆ. ವಾರ್ಷಿಕ ನಿರ್ವಹಣೆ ಅನುದಾನದಲ್ಲಿ ನಿರ್ವಹಣೆ ಮತ್ತು ದುರಸ್ತಿ ಕೆಲಸಗಳನ್ನು ಕೈಗೊಳ್ಳಲಾಗುತ್ತಿದೆ.

ಈ) -- " --

ಉ) -- " --

ಊ) ಬಂದಿರುತ್ತದೆ. ರಾಜ್ಯ ಹೆದ್ದಾರಿಯನ್ನಾಗಿ ಮಾಡಲು ಯೋಜನೆಯನ್ನು ರೂಪಿಸಲಾಗುತ್ತಿದೆ. ಯೋಜನೆ ರೂಪಿಸಿದ ನಂತರ ಅದರಂತೆ ಕ್ರಮ ಕೈಗೊಳ್ಳಲಾಗುವುದು.

ರಾಜ್ಯದಲ್ಲಿ ನಷ್ಟ ಹೊಂದಿರುವ ಕಾರ್ಖಾನೆಗಳು ಹಾಗೂ ಕಾರ್ಮಿಕರು

4365(4994) ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಬಂಡವಾಳ ಹಿಂತೆಗೆಯುವಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದ ಪ್ರಮುಖ ನಷ್ಟ ಹೊಂದಿದಂತಹ ಕಾರ್ಖಾನೆಗಳು ಖಾಸಗೀಕರಣಗೊಳಿಸಿದ ಹಿನ್ನೆಲೆಯಲ್ಲಿ ನಿರುದ್ಯೋಗಿಯಾದಂತಹ ಕಾರ್ಮಿಕರ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು) :

ಆ) ಇವರ ಪುನರ್‌ವಸತಿಯ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮವೇನು ?

ಶ್ರೀ ಡಿ.ಬಿ. ಚಂದ್ರಶೇಖರ್ (ಕಾನೂನು ಸಂಸದೀಯ ವ್ಯವಹಾರಗಳು ಹಾಗೂ ಬಂಡವಾಳ ಹಿಂತೆಗೆಯುವಿಕೆ ಸಚಿವರು) :

ಅ) ಸಾರ್ವಜನಿಕ ಉದ್ದಿಮೆಗಳ ಸುಧಾರಣ ನೀತಿಯ ಅನುಸಾರ ಇದುವರೆವಿಗೆ ಯಾವುದೇ ಕಾರ್ಖಾನೆಗಳನ್ನು ಖಾಸಗೀಕರಣಗೊಳಿಸಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಖಾತೆ ಬದಲಾವಣೆ ವಿಳಂಬ

4366(4995) ಶ್ರೀ ಬಿ. ಸೋಮಶೇಖರ್ (ಮಳವಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ತುಮಕೂರು ತಾಲ್ಲೂಕು ಉರ್ಡಿಗೆರೆ : ಹೋಬಳಿ, ಕ್ಯಾತ್ಸಂದ್ರ ಸ.ನಂ. 2:2ಬಿ1, 10:1 ಮತ್ತು ಮೈದಾಳ ಅಮಾನಿಕೆರೆ ಸ.ನಂ. 242:2, 242:3ಬಿ ಜಮೀನುಗಳ ಖಾತೆ ಪಹಣಿಯನ್ನು